ಪ್ರಜಾವಾಣಿ

## ಬೆಂಗಳೂರು ವಿಶ್ವವಿದ್ಯಾಲಯದ 58ನೇ ಘಟಿಕೋತ್ಸವ ಇಂದು

# ವಿನುತಾಗೆ ಎಂಟು ಚಿನ್ನದ ಪದಕದ ಗರಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಸರ್ವೆ ಇಲಾಖೆಯ ದಿನ ಕೂಲಿ ನೌಕರರೊಬ್ಬರ ಪುತ್ರಿ ಜೆ.ವಿನುತಾ ಬೆಂಗಳೂರು ವಿಶ್ವವಿದ್ಯಾಲಯದಿಂದ ಎಂಟು ಚಿನ್ನದ ಪದಕ, ಮೂರು ನಗದು ಬಹುಮಾನಕ್ಕೆ ಭಾಜನರಾಗಿದ್ದಾರೆ.

ಸರ್ವೆ ಕಾರ್ಯದಲ್ಲಿ ಸಹಾಯಕರಾಗಿ ಕೆಲಸ ಮಾಡುವ ಆನೇಕಲ್ ತಾಲ್ಲೂಕಿನ ಜಯರಾಮ್, ಗೃಹಿಣಿ ಚಂದ್ರಿಕಾ ದಂಪತಿ ಮಗಳ ಶಿಕ್ಷಣಕ್ಕೆ ಸಾಕಷ್ಟು ಶ್ರಮಿಸಿದ್ದಾರೆ. ಅವರ ಶ್ರಮಕ್ಕೆ ತಕ್ಕ ಫಲ ನೀಡಿರುವ ಪುತ್ರಿ ಆಕ್ಸ್‌ಫರ್ಡ್ ಕಾಲೇಜಿನ ರಸಾಯನ ವಿಜ್ಞಾನ ಸ್ನಾತಕೋತ್ತರ ಪದವಿಯಲ್ಲಿ ಮೊದಲ ರ‍್ಯಾಂಕ್ ಪಡೆದಿದ್ದಾರೆ.

'ರ‍್ಯಾಂಕ್ ಪಡೆಯುವ ನಿರೀಕ್ಷೆ ಇತ್ತು. ಆದರೆ, 8 ಚಿನ್ನದ ಪದಕ ಸಿಕ್ಕಿದ್ದು ಖುಷಿಕೊಟ್ಟಿದೆ. ಬಿ.ಇಡಿ ಮಾಡುತ್ತಿರುವೆ. ಅಪ್ಪನ ಆಸೆಯಂತೆ ಸರ್ಕಾರಿ ಪ್ರೌಢಶಾಲಾ ಶಿಕ್ಷಕಿಯಾಗುವೆ' ಎನ್ನುತ್ತಾರೆ ವಿನುತಾ.


ವಿನುತಾ


ಅಸ್ಮಾ ಬಾನು


ಭವಿಷ್ಯ


ನಮ್ರತಾ

ಬೆಂಗಳೂರು ವಿಶ್ವವಿದ್ಯಾಲಯದ ಭೌತ ವಿಜ್ಞಾನ ವಿಭಾಗದಲ್ಲಿ 6 ಚಿನ್ನದ ಪದಕ ಪಡೆದಿರುವ ಅಸ್ಮಾಬಾನು ಅದೇ ವಿಶ್ವವಿದ್ಯಾಲಯದಲ್ಲಿ ಪಿ.ಎಚ್‌ಡಿ ಅಧ್ಯಯನಕ್ಕೆ ಆಯ್ಕೆಯಾಗಿದ್ದಾರೆ. ಅಸ್ಮಾ ಮೂಲತಃ ಕೋಲಾರ ಜಿಲ್ಲೆ ಮುಳಬಾಗಿಲಿನ ನಿವೃತ್ತ ಮುಖ್ಯಶಿಕ್ಷಕ ಅಬ್ದುಲ್ ರೆಹಮಾನ್ ಅವರ ಪುತ್ರಿ, ಭವಿಷ್ಯದಲ್ಲಿ ಭೌತ ವಿಜ್ಞಾನಿಯಾಗುವ ಕನಸು ಕಟ್ಟಿಕೊಂಡಿದ್ದಾರೆ.

ಪ್ರಾಣಿ ವಿಜ್ಞಾನ ವಿಭಾಗದಲ್ಲಿ 6 ಚಿನ್ನದ ಪದಕ ಪಡೆದಿರುವ ಬೆಂಗಳೂರಿನ ಲಗ್ಗೆರೆಯ ನಮ್ರತಾ ಪದವಿ ಕಾಲೇಜು ಪ್ರಾಧ್ಯಾಪಕಿಯಾಗುವ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಸಂಸ್ಕೃತ ಸ್ನಾತಕೋತ್ತರ ಪದವಿಯಲ್ಲಿ 6 ಚಿನ್ನದ ಪದಕ ಪಡೆದಿರುವ ಭವಿಷ್ಯ ಅವರು ಖಾಸಗಿ ಕಂಪನಿ ಉದ್ಯೋಗಿ ಸಂಜಯ್ ಎಸ್.ಮಲ್ಯಾ ಅವರ ಪತ್ನಿ. ಪಿ.ಎಚ್‌ಡಿಗಾಗಿ ಸಿದ್ಧತೆ ನಡೆಸಿದ್ದಾರೆ.

ಸ್ನಾತಕೋತ್ತರದ 13 ಪದವಿಗಳಲ್ಲಿ 12 ವಿಭಾಗಗಳಲ್ಲಿ ವಿದ್ಯಾರ್ಥಿನಿಯರೇ ರ‍್ಯಾಂಕ್ ಪಡೆದಿದ್ದಾರೆ. ಸ್ನಾತಕ ಪದವಿಯ 11ರಲ್ಲಿ 6ರಲ್ಲಿ ಮೇಲುಗೈ ಸಾಧಿಸಿದ್ದಾರೆ.

ಸ್ನಾತಕ ಪದವಿಯಲ್ಲಿ ಎಂಎಸ್‌ಸಿ ಪದವಿ ಕಾಲೇಜಿನ ದೀಕ್ಷಿತ ಆರ್. ನಾಯಕ್, ವಿಶ್ವಚೇತನ ಪದವಿ ಕಾಲೇಜಿನ ಎಸ್.ಎಂ. ರವಿಕುಮಾರ್, ಯುವಿಸಿಇಯ ಜಿ.ಯೋಗೇಶ್ವರನ್ ತಲಾ ಐದು ಚಿನ್ನದ ಪದಕ ಪಡೆದಿದ್ದಾರೆ.

## ದೇವೇಗೌಡ, ಸೋಮನಾಥ್‌ಗೆ ಗೌರವ ಡಾಕ್ಟರೇಟ್

ಸೆಂಟ್ರಲ್ ಕಾಲೇಜು ಆವರಣದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ 58ನೇ ಘಟಿಕೋತ್ಸವ ಅ.17ರಂದು ಬೆಳಿಗ್ಗೆ 10.30ಕ್ಕೆ ಆರಂಭವಾಗಲಿದೆ.

28,871 ವಿದ್ಯಾರ್ಥಿಗಳು ಪದವಿಗೆ ಅರ್ಹರಾಗಿದ್ದಾರೆ. 299 ವಿದ್ಯಾರ್ಥಿಗಳು ಚಿನ್ನದ ಪದಕ, 113 ವಿದ್ಯಾರ್ಥಿಗಳು ನಗದು ಬಹುಮಾನ ಪಡೆಯಲಿದ್ದಾರೆ. 204 ಅಭ್ಯರ್ಥಿಗಳಿಗೆ ಪಿ.ಎಚ್‌ಡಿ ಪ್ರದಾನ ಮಾಡಲಾಗುವುದು. ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡ, ಇಸ್ರೊ ಅಧ್ಯಕ್ಷ ಎಸ್. ಸೋಮನಾಥ್ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಗುವುದು ಎಂದು ಕುಲಪತಿ ಎಸ್.ಎಂ. ಜಯಕರ್ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಅಧ್ಯಕ್ಷತೆ ವಹಿಸುವರು. ಝೆರೋದಾ ಸಹ ಸಂಸ್ಥಾಪಕ ನಿಖಿಲ್ ಕಾಮತ್ ಘಟಿಕೋತ್ಸವ ಭಾಷಣ ಮಾಡುವರು. ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.

